**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1130/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | | ಉಮೇಶ್ | ಪ್ರಾಸಾಃ 1 |
| ತಂದೆಯ/ಗಂಡನ ಹೆಸರು | | ಶಿವಪ್ಪ | ಚಾಸಾಃ 1 |
| ವಯಸ್ಸು | | 41 | |
| ಕೆಲಸ | | ವ್ಯವಸಾಯ | ಸಾ ಪ್ರ ಬೋ |
| ವಾಸ | | ಅಂಚಿಪುರ ಗ್ರಾಮ | ದಿಃ 06.10.2022 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನ್ಯಾಯಾಲಯದ ಮುಂದಿರುವ 1 ನೇ ಆರೋಪಿ ನನ್ನ ಚಿಕ್ಕಪ್ಪ, 2 ನೇ ಆರೋಪಿ ನನ್ನ ಚಿಕ್ಕಪ್ಪನ ಮಗ, ಚಾಸಾ 2 ರಿಂದ 6 ನಮ್ಮ ಗ್ರಾಮಸ್ಥರಾಗಿರುತ್ತಾರೆ . ನಮಗೂ ಮತ್ತು ಆರೋಪಿತರಿಗೂ ನನ್ನ ತಾಯಿಗೆ ಸೇರಿದ ಜಾಗದ ವಿಚಾರದ ಕುರಿತು ಭಿನ್ನಾಭಿಪ್ರಾಯವಿತ್ತು. ದಿನಾಂಕ 28.03.2018 ರಂದು ಬೆಳಗ್ಗೆ 07.00 ಗಂಟೆ ಸಮಯದಲ್ಲಿ 1 ನೇ ಆರೋಪಿ ಸದರಿ ಜಾಗದ ವಿಚಾರದ ಕುರಿತು ಬಂದು ನನಗೆ ನ್ಯಾಯಾಲಯದ ಮುಂದಿರುವ ಕಲ್ಲಿನಿಂದ ನನ್ನ ತಲೆಯ ಬಲಭಾಗಕ್ಕೆ ಹೊಡೆದಿರುತ್ತಾರೆ. 2 ನೇ ನ್ಯಾಯಾಲಯದ ಮುಂದಿರುವ ದೊಣ್ಣೆಯಿಂದ ನನ್ನ ಎಡಗಾಲಿಗೆ ಹೊಡೆದಿರುತ್ತಾರೆ. 2 ನೇ ಆರೋಪಿ ಕೈಯಿಂದ ನನ್ನ ಭುಜಗಳಿಗೆ ಹೊಡೆದಿರುತ್ತಾರೆ. 1 ನೇ ಆರೋಪಿ ಕೈಯಿಂದ ನನ್ನ ಎದೆಗೆ ಗುದಿರುತ್ತಾರೆ. ಚಾಸಾ 2 ಮತ್ತು 5 ರವರು ಬಂದು ಗಲಾಟೆ ಬಿಡಿಸಿರುತ್ತಾರೆ. ಚಾಸಾ 6 ರವರು ನನ್ನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ನಾನು ಈ ಕುರಿತು ದಿನಾಂಕ 28.03.2018 ರಂದು ಆಸ್ಪತ್ರೆಯಲ್ಲಿ ಹೇಳಿಕೆಯನ್ನು ನೀಡಿರುತ್ತೇನೆ. ಸದರಿ ಹೇಳಿಕೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಇದನ್ನು ನಿಪಿ 01 ಎಂದು ಸಹಿಯನ್ನು ನಿಪಿ 01(ಎ) ಎಂದು ಗುರುತಿಸಲಾಯಿತು. ದೂರಿನಲ್ಲಿ ಬಿಟ್ಟು ಹೋದ ವಿಚಾರಗಳ ಕುರಿತು ದಿನಾಂಕ 28.03.2018 ರಂದು ಮರು ಹೇಳಿಕೆಯನ್ನು ನೀಡಿರುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದಿರುವ ಕಲ್ಲು ಮತ್ತು ದೊಣ್ಣೆಯನ್ನು ನೋಡಿ ಗುರುತಿಸಿದ್ದು, ಇದನ್ನು ಮುದ್ದೆ ಮಾಲು 1 ಮತ್ತು 2 ಎಂದು ಗುರುತಿಸಲಾಯಿತು.

( ಈ ಹಂತದಲ್ಲಿ ಸಾಕ್ಷಿಯು ಭಾಗಶಃ ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾನೆ. ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು )

**<u>ಪಾಟೀ ಸವಾಲುಃ ಶ್ರೀ ಎಪಿಪಿ ಯವರಿಂದಃ</u>**

ಸದರಿ ದಿನದಂದು ಮನೆಯ ಹಿಂಭಾಗ ಜಾಗದ ವಿಚಾರದ ಕುರಿತು ಆರೋಪಿತರು ನನಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿ.

**<u>ಪಾಟೀ ಸವಾಲು ಆರೋಪಿತರ ಪರ ಶ್ರೀ ಸಿ ಎಲ್ ಬಿ ವಕೀಲರ ಪರವಾಗಿ ರವೀಶ್ ವಕೀಲರ ಮನವಿ ಮೇರೆಗೆ ಪಾಟೀ ಸವಾಲಿಗೆ ಮುಂದೂಡಲಾಯಿತು.</u>**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**ಪ್ರಧಾನ ಸಿ.ಜೆ ಮತ್ತು ಪ್ರದನ್ಯಾದಂ,**

**ನಂಜನಗೂಡು**